# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು - 572 103

ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719


**ಸಂಖ್ಯೆ: ತುವಿ:ಕಾ.ಅ.ಪ:ಸಂಯೋಜನೆ:2025–26:** 2446 **ದಿನಾಂಕ: 27.11.2024**

## ಸುತ್ತೋಲೆ

**ವಿಷಯ:** **2025–26ನೇ ಶೈಕ್ಷಣಿಕ ಸಾಲಿನ ಸಂಯೋಜನೆ ಸಂಬಂಧ ಸ್ಥಳೀಯ ವಿಚಾರಣಾ ಸಮಿತಿಗಳು ಕಾಲೇಜುಗಳಿಗೆ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ಸ್ಥಳೀಯ ವಿಚಾರಣಾ ಸಮಿತಿಗೆ ಪೂರಕವಾಗಿ ತಪ್ಪದೇ ಸಹಕರಿಸುವ ಕುರಿತು.**

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2025–26ನೇ ಶೈಕ್ಷಣಿಕ ಸಾಲಿನ ಸಂಯೋಜನೆಗೆ ಅರ್ಜಿ ಸಲ್ಲಿಸಿರುವ ಕಾಲೇಜುಗಳ ತಪಾಸಣೆಗಾಗಿ ಸ್ಥಳೀಯ ವಿಚಾರಣಾ ಸಮಿತಿಗಳು **ದಿನಾಂಕ 29.11.2024 ರಿಂದ ದಿನಾಂಕ 10.12.2024**ರ ಅವಧಿಯ ಯಾವುದಾದರೂ ಒಂದು ದಿನದಲ್ಲಿ ತಮ್ಮ ಕಾಲೇಜುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುವುದು.

ಈ ಸಂಬಂಧ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಸ್ಥಳೀಯ ವಿಚಾರಣಾ ಸಮಿತಿಯು ತಮ್ಮ ಕಾಲೇಜಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಪ್ರಾಂಶುಪಾಲರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ತಪ್ಪದೇ ಹಾಜರಿದ್ದು, ಸಂಯೋಜನೆಗೆ ಸಂಬಂಧಿಸಿದ ಪೂರಕ ದಾಖಲೆಗಳು / ಮಾಹಿತಿಯನ್ನು ಒದಗಿಸಿ ಸಂಯೋಜನೆ ಪ್ರಕ್ರಿಯೆಯನ್ನು ಯಶ್ವಸಿಗೊಳಿಸಲು ಸಹಕರಿಸುವಂತೆ ಹಾಗೂ ಸಂಯೋಜನೆ ವರದಿಯನ್ನು ಸ್ಥಳೀಯ ವಿಚಾರಣಾ ಸಮಿತಿಗಳು ಆನ್‌ಲೈನ್ ಮೂಲಕವೇ upload ಮಾಡಬೇಕಾಗಿರುವುದರಿಂದ ತಮ್ಮ ಕಾಲೇಜಿನಲ್ಲಿ ಗಣಕತಂತ್ರದಲ್ಲಿ (Computer Knowledge) ನುರಿತ ಜ್ಞಾನ ಹೊಂದಿರುವವರನ್ನು ಸ್ಥಳೀಯ ವಿಚಾರಣಾ ಸಮಿತಿಗೆ ಸಹಕರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ.

27-11-24

ನಿರ್ದೇಶಕರು

ನಿರ್ದೇಶಕರು
ಕಾಲೇಜು ಅಭಿವೃದ್ಧಿ ಪರಿಷತ್
ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು

ಗೆ,

**ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ವ್ಯಾಪ್ತಿಯ ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

ಪ್ರತಿಗಳು:

1) ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿ, ತುಮಕೂರು ವಿಶ್ವವಿದ್ಯಾನಿಲಯ. ತುಮಕೂರು.
2) ಮಾನ್ಯ ಕುಲಸಚಿವರ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ. ತುಮಕೂರು
3) ಕಛೇರಿ ಪ್ರತಿ.